All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

15.09.2025 7.35 p.m.

ಮುಖ್ಯಾಂಶಗಳು :

- ಬಿಹಾರದಲ್ಲಿ ೪೦ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಕೃತಕ ಬುದ್ಧಿ ಮತ್ತೆಯ ವೇಗದೊಂದಿಗೆ ನಿಯಮಗಳೂ ಜೊತೆಯಾಗಿ ಚಲಿಸಬೇಕು - ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್
- ಸ್ವಚ್ಛ ಭಾರತ್ ಅಭಿಯಾನದ ಸ್ವಚ್ಛತಾ ಇ ಸೇವಾ -೨೦೨೫ ದೇಶಾದ್ಯಂತ ಇದೇ ೧೭ಕ್ಕೆ ಆರಂಭ
- ವಕ್ಫ್ ತಿದ್ದುಪಡಿ ಮಸೂದೆ; ಮುಸ್ಲಿಂ ಸಮುದಾಯಕ್ಕೆ ಪ್ರಯೋಜನಕಾರಿ - ಸಚಿವ ಕಿರಣ್ ರಿಜಿಜು

*><><>*><><>*

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ಪೂರ್ಣಿಯಾ ಜಿಲ್ಲೆಯಿಂದ ಬಿಹಾರದಾದ್ಯಂತ ೪೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ ( ೨೪ ಸೆಕೆಂಡುಗಳು)

ಪೂರ್ಣಿಯಾದ ಗುಲಾಬ್ ಬಾಗ್‌ನಲ್ಲಿರುವ ಶೀಶಾ ಬಾಡಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಬಿಹಾರದ ಜನರ ಜೀವನವನ್ನು ಸುಲಭಗೊಳಿಸಲು ಡಬಲ್ ಎಂಜಿನ್ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದು ಹೇಳಿದರು. ಪ್ರಧಾನ ಮಂತ್ರಿ ಅವರು ಹೊಸದಾಗಿ ನಿರ್ಮಿಸಲಾದ ಪೂರ್ಣಿಯಾ ವಿಮಾನ ನಿಲ್ದಾಣವನ್ನು ಉದ್ಘಾಟಿಸಿದರು ಮತ್ತು ವಿಮಾನ ನಿಲ್ದಾಣದಿಂದ ವಿಮಾನ ಸೇವೆಯನ್ನು ಪ್ರಾರಂಭಿಸಿದರು. ಈಗ ಪೂರ್ಣಿಯಾ ದೇಶದ ವಾಯುಯಾನ ನಕ್ಷೆಯಲ್ಲಿ ಸ್ಥಾನ ಪಡೆದಿದೆ. ಈ ವಿಮಾನ ನಿಲ್ದಾಣದೊಂದಿಗೆ, ಪೂರ್ಣಿಯಾದಿಂದ ದೇಶದ ಇತರ ಭಾಗಗಳಿಗೆ ದೇಶೀಯ ವಿಮಾನ ಸೇವೆಗಳು ಪ್ರಾರಂಭವಾಗಲಿವೆ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರು ಬಿಹಾರದಲ್ಲಿ ರಾಷ್ಟ್ರೀಯ ಮಖಾನಾ ಮಂಡಳಿಗೆ ಚಾಲನೆ ನೀಡಿ, ಬಿಹಾರದ ಜನರಿಗೆ ಭರವಸೆ ನೀಡಿದಂತೆ, ಕೇಂದ್ರ ಸರ್ಕಾರವು ನಿನ್ನೆ ರಾಷ್ಟ್ರೀಯ ಮಖಾನಾ ಮಂಡಳಿಯ ಸ್ಥಾಪನೆಗೆ ಅಧಿಸೂಚನೆ ಹೊರಡಿಸಿದೆ ಎಂದು ಹೇಳಿದರು. ಮಂಡಳಿಯು ಉತ್ಪಾದನೆ ಮತ್ತು ಹೊಸ ತಂತ್ರಜ್ಞಾನ ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ, ಸುಗ್ಗಿಯ ನಂತರದ ನಿರ್ವಹಣೆಯನ್ನು ಬಲಪಡಿಸುತ್ತದೆ, ಮೌಲ್ಯವರ್ಧನೆ ಮತ್ತು ಸಂಸ್ಕರಣೆಯನ್ನು ಪ್ರೋತ್ಸಾಹಿಸುತ್ತದೆ ಮತ್ತು ಬಿಹಾರ ಮತ್ತು ದೇಶಾದ್ಯಂತ ಮಖಾನಾ, ರೈತರಿಗೆ ಮಾರುಕಟ್ಟೆ, ರಫ್ತು ಮತ್ತು ಬ್ರ್ಯಾಂಡ್ ಅಭಿವೃದ್ಧಿಯನ್ನು ಸುಗಮಗೊಳಿಸುತ್ತದೆ.

ದೇಶದ ಒಟ್ಟು ಮಖಾನಾ ಉತ್ಪಾದನೆಯಲ್ಲಿ ಬಿಹಾರ ಸುಮಾರು ಶೇಕಡಾ ೯೦ ರಷ್ಟು ಕೊಡುಗೆ ನೀಡುತ್ತದೆ. ಭಾಗಲ್ಪುರದ ಪಿರ್ಪೈಂಟಿಯಲ್ಲಿ ೨ ಸಾವಿರದ ೪೦೦ ಮೆಗಾವ್ಯಾಟ್ ಉಷ್ಣ ವಿದ್ಯುತ್ ಯೋಜನೆಗೆ ಪ್ರಧಾನ ಮಂತ್ರಿ ಅಡಿಪಾಯ ಹಾಕಿದರು. ರೈಲು ವಲಯದಲ್ಲಿ, ಪ್ರಧಾನ ಮಂತ್ರಿಯವರು ಬಹು ಯೋಜನೆಗಳನ್ನು ಉದ್ಘಾಟಿಸಿದರು ಮತ್ತು ಶಿಲಾನ್ಯಾಸ ಮಾಡಿದರು ಹಾಗೂ ಹೊಸ ರೈಲುಗಳಿಗೆ

ಹಸಿರು ನಿಶಾನೆ ತೋರಿದರು. ಗಂಗಾ ನದಿಯಾದ್ಯಂತ ನೇರ ರೈಲು ಸಂಪರ್ಕವನ್ನು ಒದಗಿಸುವ ೨ ಸಾವಿರದ ೧೭೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಿಕ್ರಮಶಿಲಾ ಮತ್ತು ಕಟಾರಿಯಾ ನಡುವಿನ ರೈಲು ಮಾರ್ಗಕ್ಕೆ ಪ್ರಧಾನ ಮಂತ್ರಿಯವರು ಶಿಲಾನ್ಯಾಸ ನೆರವೇರಿಸಿದರು. ಸೀಮಾಂಚಲ್‌ನ ಅರಾರಿಯಾ ಮತ್ತು ಕಿಶನ್‌ಗಂಜ್ ಜಿಲ್ಲೆಗಳನ್ನು ಸಂಪರ್ಕಿಸುವ ೪ ಸಾವಿರದ ೪೧೦ ಕೋಟಿ ರೂಪಾಯಿಗಳ ಮೌಲ್ಯದ ಅರಾರಿಯಾ ಮತ್ತು ಗಲ್ಗಲಿಯಾ ನಡುವಿನ ಹೊಸ ರೈಲು ಮಾರ್ಗವನ್ನು ಅವರು ಉದ್ಘಾಟಿಸಿದರು.

*><><><*><><><*

ಕೃತಕ ಬುದ್ಧಿಮತ್ತೆ ವೇಗವಾಗಿ ಚಲಿಸುತ್ತಿದ್ದರೆ, ನಿಯಮಗಳು ಸಹ ಸಮಾನವಾಗಿ ಓಟವನ್ನು ನಡೆಸಬೇಕು ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಇಂದು ನವದೆಹಲಿಯಲ್ಲಿ ನೀತಿ ಆಯೋಗದ ವಿಕಸಿತ್ ಭಾರತ್ ಮತ್ತು ಫ್ರಾಂಟಿಯರ್ ಟೆಕ್ ರೆಪೊಸಿಟರಿಗಾಗಿ ಕೃತಕ ಬುದ್ಧಿಮತ್ತೆ ಮಾರ್ಗಸೂಚಿಯ ವರದಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಸಚಿವರು, ಕೃತಕ ಬುದ್ಧಿಮತ್ತೆ ತ್ವರಿತ ಬೆಳವಣಿಗೆಯ ಬಗ್ಗೆ ಎಚ್ಚರಿಕೆ ನೀಡಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಭವಿಷ್ಯದ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಳ್ಳುವ ಮತ್ತು ಪ್ರತಿಭಾ ಪೈಪ್‌ಲೈನ್ ಅನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ಒತ್ತಿ ಹೇಳಿದರು. ಜಗತ್ತು ಪ್ರಕ್ಷುಬ್ಧತೆಯ ಮೂಲಕ ಸಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ವೇಗವಾಗಿ ಬೆಳೆಯುತ್ತಿದೆ. ಇಂದಿನ ಭಾರತದ ಬೆಳವಣಿಗೆಯು ಎಲ್ಲರನ್ನೂ ಒಳಗೊಳ್ಳುವಂತಿದೆ, ಬಲವಾದ ತಂತ್ರಜ್ಞಾನದ ಹಿನ್ನೆಲೆಯಲ್ಲಿ ಬಲಿಷ್ಠವಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

*><><><*><><><*

ದೇಶದಾದ್ಯಂತ ಸ್ವಚ್ಛ ಭಾರತ ಮಿಷನ್ ಆಶ್ರಯದಲ್ಲಿ ಸ್ವಚ್ಛತಾ ಹಿ ಸೇವಾ ೨೦೨೫ಕ್ಕೆ ವೇದಿಕೆ ಸಿದ್ಧವಾಗಿದೆ. ಇದೇ ೧೭ ರಂದು ಪ್ರಾರಂಭವಾಗಿ ಅಕ್ಟೋಬರ್ ೨ ರಂದು ಗಾಂಧಿ ಜಯಂತಿಯಂದು ಮುಕ್ತಾಯಗೊಳ್ಳುವ ಈ ೧೫ ದಿನಗಳ ಅಭಿಯಾನವು ದೇಶಾದ್ಯಂತ ಲಕ್ಷಾಂತರ ಜನರನ್ನು ಒಟ್ಟುಗೂಡಿಸಿ ಹೆಚ್ಚಿನ ಪರಿಣಾಮ ಬೀರುವ ಸ್ವಚ್ಛತಾ ಅಭಿಯಾನಗಳನ್ನು ನಡೆಸಲಾಗುತ್ತದೆ. ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ , ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಜಲಶಕ್ತಿ ಸಚಿವಾಲಯ ಜಂಟಿಯಾಗಿ ಪ್ರಾರಂಭಿಸಿರುವ ಸ್ವಚ್ಛತಾ ಹಿ ಸೇವಾ ೨೦೨೫ ನಾಗರಿಕರು, ಸಮುದಾಯಗಳು ಮತ್ತು ಸಂಸ್ಥೆಗಳನ್ನು ಒಟ್ಟುಗೂಡಿಸಿ ಸ್ವಚ್ಛತೆಗೆ ಉತ್ತೇಜಿಸುತ್ತದೆ. ಪೂರ್ವಭಾವಿ ಕಾರ್ಯಕ್ರಮದಲ್ಲಿ ಮಾತನಾಡಿದ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್, ಕಳೆದ ವರ್ಷದಂತೆ ಸ್ವಚ್ಛತಾ ಹಿ ಸೇವಾ ೨೦೨೫ ರ ಅಡಿಯಲ್ಲಿ ಸ್ವಚ್ಛತಾ ಗುರಿ ಘಟಕಗಳ ಮೇಲೆ ಗಮನಹರಿಸಬೇಕು ಎಂದು ಹೇಳಿದರು. ಸ್ವಚ್ಛತಾ ಹಿ ಸೇವಾ ೨೦೨೫ ರ ಭಾಗವಾಗಿ, ರಾಷ್ಟ್ರವ್ಯಾಪಿ ಸ್ವಯಂಸೇವಾ ಶ್ರಮದಾನ - "ಏಕ್ ದಿನ್, ಏಕ್ ಘಂಟಾ, ಏಕ್ ಸಾಥ್" - ಸೆಪ್ಟೆಂಬರ್ ೨೫, ೨೦೨೫ ರಂದು ಆಯೋಜಿಸಲಾಗುವುದು. ಸ್ವಚ್ಛತಾ ಗುರಿ ಘಟಕಗಳ ರೂಪಾಂತರಕ್ಕೆ ಸಂಬಂಧಿಸಿದಂತೆ ಸ್ಥಳೀಯ ಮಟ್ಟದಲ್ಲಿ ಪ್ರಯತ್ನಗಳು ಮುಂದುವರೆದಿವೆ. ನಾಗರಿಕರು, ರಾಜಕೀಯ ನಾಯಕತ್ವ, ಸ್ವಚ್ಛತಾ ರಾಯಭಾರಿಗಳು, ಯುವ ಗುಂಪುಗಳು ನಡೆಸಬೇಕಾದ ಶ್ರಮದಾನ ಮತ್ತು ಪ್ಲಾಗಿಂಗ್ ಡ್ರೈವ್‌ಗಳ ಮೇಲೆ ಗಮನ ಹರಿಸಲಾಗುವುದು ಎಂದು ಅವರು ತಿಳಿಸಿದರು.

*><><><*><><><*

ವಕ್ಫ್ ತಿದ್ದುಪಡಿ ಮಸೂದೆಯ ಮೇಲಿನ ಸುಪ್ರೀಂ ಕೋರ್ಟ್ ತೀರ್ಪು ಭಾರತದ ಸಂಸದೀಯ ಪ್ರಜಾಪ್ರಭುತ್ವದ ದಾರಿದೀಪ ಎಂದು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಅವರು ಇಂದು, ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಇತಿಹಾಸದಲ್ಲಿಯೇ ಅತಿ ದೀರ್ಘ ಚರ್ಚೆಯ ನಂತರ ಮಸೂದೆಯನ್ನು ಸಂಸತ್ತಿನಲ್ಲಿ ಅಂಗೀಕರಿಸಲಾಗಿದೆ. ಇಡೀ ಮುಸ್ಲಿಂ ಸಮುದಾಯಕ್ಕೆ ಇದು ಪ್ರಯೋಜನಕಾರಿ ಎಂದು ಹೇಳಿದರು.

ಧ್ವನಿ : ಕಿರಣ್ ರಿಜಿಜು ( ೨೭ ಸೆಕೆಂಡುಗಳು)

ಸರ್ಕಾರವು ಈ ಮಸೂದೆಯ ಹಿಂದಿನ ಎಲ್ಲಾ ಸಂಗತಿಗಳು ಮತ್ತು ತಾರ್ಕಿಕತೆಯನ್ನು ಸುಪ್ರೀಂ ಕೋರ್ಟ್ ಮುಂದೆ ಮಂಡಿಸಿದೆ ಮತ್ತು ಸುಪ್ರೀಂ ಕೋರ್ಟ್‌ನ ತೀರ್ಪನ್ನು ಆ ದೃಷ್ಟಿಕೋನಕ್ಕೆ ಸಿಕ್ಕ ಜಯ ಎಂದು ಅವರು ಶ್ಲಾಘಿಸಿದರು. ದೇಶದಲ್ಲಿ ಮಾನವ ಹಕ್ಕುಗಳ ಪರಿಸ್ಥಿತಿ ಹದಗೆಡುತ್ತಿದೆ ಎಂಬ ವರದಿಗಳನ್ನು ನಿರಾಕರಿಸಿದ ಅವರು, ಭಾರತವು ನೋಡಿಕೊಳ್ಳುವ ರೀತಿಯಲ್ಲಿ ಬೇರೆ ಯಾವುದೇ ರಾಷ್ಟ್ರವು ತನ್ನ ಅಲ್ಪಸಂಖ್ಯಾತರ ಬಗ್ಗೆ ಕಾಳಜಿ ವಹಿಸುವುದಿಲ್ಲ ಎಂದು ಹೇಳಿದರು. ಭಾರತದಲ್ಲಿ ಯಾರೂ ಅಸುರಕ್ಷಿತರಲ್ಲ ಮತ್ತು ೨೦೧೪ ರಿಂದ ಅಲ್ಪಸಂಖ್ಯಾತರ ಮೇಲಿನ ಹಲ್ಲೆ ಘಟನೆಗಳು ಕಡಿಯಾಗಿವೆ. ಭಾರತವು ತನ್ನ ಸಂವಿಧಾನದಿಂದ ಮಾತ್ರವಲ್ಲದೆ ಅದರ ಗುಣಲಕ್ಷಣದಿಂದಲೂ ನಿಜವಾದ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ ಎಂದು ಅವರು ತಿಳಿಸಿದರು.

*><><><*><><><*

ಹಜಾರಿಬಾಗ್‌ನಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆಗಳಲ್ಲಿ ಸಿಆರ್‌ಪಿಎಫ್‌ನ ಕೋಬ್ರಾ ಬೆಟಾಲಿಯನ್ ಮತ್ತು ಜಾರ್ಖಂಡ್ ಪೊಲೀಸರ ಜಂಟಿ ತಂಡವು ಪ್ರಮುಖ ಯಶಸ್ಸನ್ನು ಸಾಧಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಹೇಳಿದ್ದಾರೆ. ಈ ಕಾರ್ಯಾಚರಣೆಯಲ್ಲಿ ನಕ್ಸಲ್ ಕಮಾಂಡರ್ ಸಹದೇವ್ ಸೊರೆನ್ ಸಾವನ್ನಪ್ಪಿದ್ದಾರೆ. ಅವರ ತಲೆಗೆ ಒಂದು ಕೋಟಿ ರೂಪಾಯಿ ಬಹುಮಾನ ಘೋಷಿಸಲಾಗಿತ್ತು ಎಂದು ಸಾಮಾಜಿಕ ಜಾಲತಾಣದಲ್ಲಿ ಅಮಿತ್ ಶಾ ತಿಳಿಸಿದ್ದಾರೆ. ನಕ್ಸಲೈಟ್‌ಗಳಾದ ರಘುನಾಥ್ ಹೆಂಬ್ರಾಮ್ ಮತ್ತು ಬಿರ್ಸೆನ್ ಗಂಜು ಭದ್ರತಾ ಪಡೆಗಳಿಂದ ಹತರಾಗಿದ್ದು, ಈ ಕಾರ್ಯಾಚರಣೆಯ ನಂತರ, ಉತ್ತರ ಜಾರ್ಖಂಡ್‌ನ ಬೊಕಾರೊ ಪ್ರದೇಶದಿಂದ ನಕ್ಸಲಿಸಂ ಸಂಪೂರ್ಣವಾಗಿ ಕೊನೆಗೊಂಡಿದೆ ಎಂದು ಗೃಹ ಸಚಿವರು ಮಾಹಿತಿ ನೀಡಿದರು. ಶೀಘ್ರದಲ್ಲೇ ಇಡೀ ದೇಶವು ನಕ್ಸಲ್ ಸಮಸ್ಯೆಯಿಂದ ಮುಕ್ತವಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

*><><><*><><><*

ರೈಲ್ವೇ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಂದು ಅಮೃತ ಭಾರತ ನಿಲ್ದಾಣ ಯೋಜನೆಯಡಿಯಲ್ಲಿ ಪುನರಾಭಿವೃದ್ಧಿಗೊಳ್ಳುತ್ತಿರುವ ಅಳ್ನಾವರ ರೈಲು ನಿಲ್ದಾಣದ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಪ್ರಯಾಣಿಕರ ಅನುಕೂಲತೆಯನ್ನು ಹೆಚ್ಚಿಸಲು ಮತ್ತು ಒಟ್ಟಾರೆ ನಿಲ್ದಾಣದ ಮೂಲಸೌಕರ್ಯವನ್ನು ಸುಧಾರಿಸಲು ರೈಲ್ವೆ ಅಧಿಕಾರಿಗಳಿಗೆ ಸಲಹೆ-ಸೂಚನೆ ನೀಡಿದರು. ಈ ನಡುವೆ ಹುಬ್ಬಳ್ಳಿಯಿಂದ ಬೆಳಗಾವಿಯವರೆಗೆ ರೈಲಿನಲ್ಲಿ ಸಂಚರಿಸುವ ಮೂಲಕ, ಈ ಭಾಗದ ರೈಲು ಹಳಿಗಳ ತಪಾಸಣೆ ನಡೆಸಿ, ಪ್ರಮುಖ ಕಾರ್ಯಾಚರಣೆ ಮತ್ತು ಸುರಕ್ಷತಾ ಅಂಶಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಹುಬ್ಬಳ್ಳಿಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಶ್ರೀಮತಿ ಬೇಲಾ ಮೀನಾ ಸೇರಿದಂತೆ ರೈಲ್ವೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

*><><><*><><><*